ಜೆಎಸ್‌ಎಸ್ ಮಹಾವಿದ್ಯಾಪೀಠ
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಬಿ.ಎನ್. ರಸ್ತೆ, ಮೈಸೂರು - 570 025
ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ : 12.10.2017

## ಪ್ರಕಟಣೆ ಕೃಪೆಗಾಗಿ

## ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ ಶ್ರೀ ರಾಜೇಂದ್ರ ಶ್ರೀಗಳ ಬದುಕು

- ಡಾ. ಶ್ರೀ ಅಭಿನವ ಮಲ್ಲಿಕಾರ್ಜುನ ದೇಶಿಕೇಂದ್ರ ಸ್ವಾಮಿಗಳು

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 102 ನೆಯ ಜಯಂತಿ ಮಹೋತ್ಸವವನ್ನು ಆಚರಿಸಲಾಯಿತು.

ಡಾ. ಎನ್ ಎಸ್ ತಾರಾನಾಥ್, ವಿಶ್ರಾಂತ ಪ್ರಾಧ್ಯಾಪಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ರವರು ಶ್ರೀಗಳಿಗೆ ನುಡಿನಮನ ಸಲ್ಲಿಸುತ್ತಾ. ಪಾರಂಪರಿಕ ನಗರವಾದ ಮೈಸೂರಿಗೆ ರಾಜಕಳೆ, ಜ್ಞಾನಕಳೆ, ದೈವೀಕ ಕಳೆಯ ಜೊತೆಗೆ ಶ್ರೀ ಸುತ್ತೂರು ಮಠವು ಆಧ್ಯಾತ್ಮಿಕ ಕಳೆಯನ್ನು ತುಂಬಿದೆ ಎಂದು ತಿಳಿಸಿದರು. ಶ್ರೀಮಠದ ಗುರುಪರಂಪರೆಯಲ್ಲಿ ಅಗ್ರಗಣ್ಯರಾದ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಅನ್ನ, ಅಕ್ಷರ ಹಾಗೂ ಆರೋಗ್ಯ ದಾಸೋಹದ ಮೂಲಕ ಸಮಾಜವನ್ನು ಉನ್ನತ ಮಟ್ಟಕ್ಕೇರಿಸಿದರು. ಅಸಂಖ್ಯ ಸಾಹಿತಿಗಳು, ರಾಜಕಾರಿಣಿಗಳು, ಶಿಕ್ಷಣ ತಜ್ಞರು, ವೈದ್ಯರು ಹಾಗೂ ಆಡಳಿತಗಾರರು ಇವರ ಪಾಲನೆ ಪೋಷಣೆಯಲ್ಲಿ ಸಮಾಜವನ್ನು ಬೆಳೆಸಿದರು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೃಷ್ಣರಾಜ ಕ್ಷೇತ್ರದ ಶಾಸಕರು, ಕರ್ನಾಟಕ ರೇಷ್ಮೆ ಉದ್ಯಮ ನಿಗಮದ ಅಧ್ಯಕ್ಷರಾದ ಶ್ರೀ ಎಂ ಕೆ ಸೋಮಶೇಖರ್ ಅವರು ಮಾತನಾಡುತ್ತಾ, ರಾಜೇಂದ್ರ ಶ್ರೀಗಳವರು ಕಠಿಣ ಪರಿಶ್ರಮದಿಂದ ಕಟ್ಟಿ ಬೆಳಸಿದ ಶಿಕ್ಷಣ ಸಂಸ್ಥೆಗಳು ಇಂದು ಹಲವರಿಗೆ ಭವಿಷ್ಯವನ್ನು ಕಲ್ಪಿಸುತ್ತಿವೆ. ಅನ್ನದಾಸೋಹ, ಅಕ್ಷರ ದಾಸೋಹದ ಮೂಲಕ ಗ್ರಾಮೀಣ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಕಾರಣೀಭೂತರಾಗಿದ್ದಾರೆ. ಲಕ್ಷಾಂತರ ಕುಟುಂಬಗಳು ರಾಜೇಂದ್ರ ಶ್ರೀಗಳ ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಗಳಿಂದ ಏಳ್ಗೆಯನ್ನು ಸಾಧಿಸಿವೆ ಎಂದು ಅಭಿಪ್ರಾಯಪಟ್ಟರು.

ಡಾ. ಶ್ರೀ ಅಭಿನವ ಮಲ್ಲಿಕಾರ್ಜುನ ದೇಶಿಕೇಂದ್ರ ಸ್ವಾಮಿಗಳು, ಶ್ರೀ ವಿರಕ್ತ ಮಹಾಸಂಸ್ಥಾನ ಮಠ ಕುಪ್ಪೂರು ತಮ್ಮಡಿಹಳ್ಳಿ ಜಯಂತಿ ಮಹೋತ್ಸವದ ಸಮ್ಮುಖವಹಿಸಿ ರಾಜೇಂದ್ರ ಶ್ರೀಗಳ ಗುಣಗಾನ ಮಾಡಿದರು. ಮನುಷ್ಯರಿಗೆ ವಿದ್ಯಾರ್ಜನೆ ಎಂಬುದು ಎರಡನೇ ಜನ್ಮವಿದ್ದಂತೆ. ಅಂತಹ ವಿದ್ಯಾರ್ಜನೆಯ ಮೂಲಕ ಸಮಾಜವನ್ನು ಪ್ರಗತಿಪಥದತ್ತ ಕೊಂಡೊಯ್ಯುವ ಕಾರ್ಯದಲ್ಲಿ ತಮ್ಮ ಬಾಳನ್ನು ಗಂಧದ ಕೊರಡಿನಂತೆ ತೇಯ್ದುಕೊಂಡ ಮಹಾಮಹಿಮರು. ನಾಡಿನ ರಾಷ್ಟ್ರಕವಿ ಕುವೆಂಪುರವರಿಂದ ಕೀರ್ತಿಸಲ್ಪಟ್ಟ ಪರಮಪೂಜ್ಯರ ಬದುಕು ಆದರ್ಶವಾಗಿದೆ. ಜಾತಿ ಮತ ಭೇದವಿಲ್ಲದೆ ಎಲ್ಲಾ ದುರ್ಬಲರ ಆಶಾಕಿರಣವಾಗಿ ಬೆಳಗಿದ ಶ್ರೀಗಳ ಆದರ್ಶ ಬದುಕು ನಮ್ಮೆಲ್ಲರ ಬದುಕನ್ನು ಅರಳಿಸುವಂತಾಗಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರು ಯಾರ ಶಿಫಾರಸ್ಸು ಇಲ್ಲದ ತಾವು ತಮ್ಮ ವಿದ್ಯಾರ್ಥಿ ದೆಸೆಯಲ್ಲಿ ಪರಮಪೂಜ್ಯರ ಅನುಗ್ರಹಕ್ಕೆ ಪಾತ್ರವಾದ ಅನೇಕ ಸಂದರ್ಭಗಳನ್ನು ಸ್ಮರಿಸಿಕೊಂಡರು.

ಇದೇ ಸಂದರ್ಭದಲ್ಲಿ ಪೂಜ್ಯರ 102 ನೆ ಜಯಂತಿ ಪ್ರಯುಕ್ತ ಕಾಲೇಜಿನಲ್ಲಿ ನಡೆಸಲಾಗಿದ್ದ ಅನೇಕ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಶೈಕ್ಷಣಿಕವಾಗಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ವಿವಿಧ ದತ್ತಿ ಬಹುಮಾನಗಳನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಕು. ಕೀರ್ತನ ಕೆ ಎಂ ಪ್ರಾರ್ಥಿಸಿದರು, ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿದರು, ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಸಿಬ್ಬಂದಿ ವರ್ಗದವರಿಗೆ ಹಾಗೂ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್ ಸೋಮಶೇಖರರವರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಭೋದಿಸಿದರು. ಕಾರ್ಯಕ್ರಮವನ್ನು ಸಂಚಾಲಕರಾದ ಪ್ರೊ ಡಿ ಎಸ್ ಸದಾಶಿವಮೂರ್ತಿರವರು ನಿರೂಪಿಸಿದರು. ಉಪನ್ಯಾಸಕರಾದ ಶ್ರೀ ಎಂ. ಶಿವಕುಮಾರ್ ವಂದಿಸಿದರು.

ಪ್ರಾಂಶುಪಾಲರು
(ಪ್ರೊ ಎಂ ಮಹದೇವಪ್ಪ)

ಗೆ
ಸಂಪಾದಕರು